All India Radio: Bangalore
Regional Bulletin In Kannada
22.06.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
22.06.2025 / 6.40 p.m.
<><><><>

ಮುಖ್ಯಾಂಶಗಳು

೧. ಅಕ್ರಮ ಗಣಿಗಾರಿಕೆ ಕುರಿತ ಸಚಿವ ಎಚ್.ಕೆ.ಪಾಟೀಲ್ ಅವರ ಪತ್ರಕ್ಕೆ ರಾಜ್ಯ ಸರ್ಕಾರ ಕೂಡಲೇ ಸ್ಪಂದಿಸಲಿ- ಸಂಸದ ಬಸವರಾಜ್ ಬೊಮ್ಮಾಯಿ

೨. ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷಾ ಕಾರ್ಯ: ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಳೆಯಿಂದ ಪ್ರತಿ ಮನೆಗೆ ಸ್ಟಿಕ್ಕರ್

೩. ವಸತಿ ಯೋಜನೆ ಅಕ್ರಮದ ಬಗ್ಗೆ ತನಿಖೆಗೆ ಬಿಜೆಪಿ ಆಗ್ರಹ

೪. ರಾಜ್ಯದಲ್ಲಿ ಮುಂಗಾರು ಚುರುಕು; ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮುಂದುವರಿದ ಮಳೆ

><><><><<><><><

ಅಕ್ರಮ ಗಣಿಗಾರಿಕೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಾನೂನು ಸಚಿವ ಎಚ್.ಕೆ.ಪಾಟೀಲ್ ಬರೆದಿರುವ ಪತ್ರಕ್ಕೆ ರಾಜ್ಯ ಸರ್ಕಾರ ಕೂಡಲೇ ಸ್ಪಂದಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ರಮ ಗಣಿಗಾರಿಕೆ ಪ್ರಕರಣ ಕುರಿತು ಕಾನೂನು ಸಚಿವರು ಅಸಮಾಧಾನ ವ್ಯಕ್ತಪಡಿಸಿದ್ದು, ನೋಂದಾಯಿತ ಪ್ರಕರಣಗಳ ಪೈಕಿ ಶೇಕಡ ೯೦ರಷ್ಟು ಇತ್ಯರ್ಥವಾಗಿಲ್ಲ ಎನ್ನುವುದು ಗಂಭೀರ ವಿಷಯವಾಗಿದೆ. ಇದಕ್ಕೆ ಮುಖ್ಯಮಂತ್ರಿ ಹೇಗೆ ಸ್ಪಂದಿಸುತ್ತಾರೆ ಎಂಬುದು ರಾಜ್ಯದ ಜನತೆಯ ಕುತೂಹಲದ ಪ್ರಶ್ನೆಯಾಗಿದೆ ಎಂದರು. ಎಚ್.ಕೆ.ಪಾಟೀಲ್ ಅಕ್ರಮ ಗಣಿಗಾರಿಕೆ ಪ್ರಕರಣದ ತನಿಖೆಗೆ ವಿಶೇಷ ನ್ಯಾಯಾಲಯದ ಉನ್ನತ ಮಟ್ಟದ ತನಿಖೆಗೆ ಒತ್ತಾಯಿಸಿದ್ದಾರೆ. ಆದರೆ ಈಗಾಗಲೇ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹಲವು ಮೊಕದ್ದಮೆ ದಾಖಲಾಗಿದ್ದು, ಅದಕ್ಕಾಗಿ ವಿಶೇಷ ತನಿಖಾ ತಂಡ ರಚನೆಯಾಗಿದೆ ಎಂದು ಹೇಳಿದರು. ಸಿಬಿಐ ತನಿಖೆ ನಡೆಯುತ್ತಿದ್ದು, ಎಸ್ಐಟಿ ಮುಖ್ಯಸ್ಥರ ಮೇಲೆ ಹಲವು ಆರೋಪ ಕೇಳಿಬರುತ್ತಿವೆ. ಇವುಗಳ ಬಗ್ಗೆಯೂ ಸಹ ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕ್ರಮಕೈಗೊಳ್ಳಬೇಕಾದ ಅಗತ್ಯವಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದರು.

><><><><<><><><

ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷಾ ಕಾರ್ಯ ನಡೆಸುತ್ತಿರುವ ಕುರಿತು ಖಾತರಿಪಡಿಸಿಕೊಳ್ಳಲು ನಾಳೆಯಿಂದ ಪ್ರತಿ ಮನೆಗೆ ಸ್ಟಿಕ್ಕರ್ ಅಂಟಿಸುವಂತೆ ಅಧಿಕಾರಿಗಳಿಗೆ ಬಿಬಿಎಂಪಿ

ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ.  ರಾಜ್ಯದಲ್ಲಿ ಶಿಕ್ಷಣ ಮತ್ತು ಸರ್ಕಾರಿ ಸೇವೆಗಳಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿನ ೧೦೧ ಜಾತಿಗಳಿಗೆ ಸೇರಿದವರ ಪ್ರಾತಿನಿಧ್ಯತೆ ಕುರಿತು ವೈಜ್ಞಾನಿಕ ದತ್ತಾಂಶವನ್ನು ಸಂಗ್ರಹಿಸಲು, ಇದೇ ಮೇ ೫ ರಿಂದ ಮನೆ-ಮನೆ ಭೇಟಿ ನೀಡುವ ಮೂಲಕ ರಾಜ್ಯಾದ್ಯಂತ ಸಮೀಕ್ಷೆ ಪ್ರಾರಂಭಿಸಲಾಗಿದೆ ಎಂದರು. ಪಾಲಿಕೆಯ ತಂಡ ಅಥವಾ ಗಣತಿದಾರರು ನಾಳೆಯಿಂದ ಮನೆ-ಮನೆಗೆ ಭೇಟಿ ನೀಡಿ, ಸಮೀಕ್ಷಾ ಕಾರ್ಯ ನಡೆಸುತ್ತಾರೆ. ಮನೆಗೆ ಭೇಟಿ ನೀಡಿರುವ ಪುರಾವೆಯಾಗಿ ಪ್ರತಿ ಮನೆಗೆ ಸ್ಟಿಕ್ಕರ್ ಅಂಟಿಸುತ್ತಾರೆ ಎಂದು ಅವರು ಹೇಳಿದರು.  ಸಮೀಕ್ಷಾ ಕಾರ್ಯದಲ್ಲಿ ಶೇಕಡ ೧೦೦ ರಷ್ಟು ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವವರು ಸಮೀಕ್ಷೆಯಲ್ಲಿ ಭಾಗವಹಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮನವಿ ಮಾಡಿದ್ದಾರೆ.

><><><><><><><

ರಾಜ್ಯದ ಕಾಂಗ್ರೆಸ್ ಸರ್ಕಾರ ಬಡವರ ಮನೆಗಳಿಗೆ ಕನ್ನ ಹಾಕುತ್ತಿದೆ. ಇದಕ್ಕೆ ಅವರದ್ದೇ ಪಕ್ಷದ ಹಿರಿಯ ಶಾಸಕ ಬಿ.ಆರ್.ಪಾಟೀಲ್ ಮಾಡಿರುವ ಆರೋಪವೇ ಸಾಕ್ಷಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ದೂರಿದ್ದಾರೆ.  ಮಂಡ್ಯ ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜೀವ್‌ಗಾಂಧಿ ವಸತಿ ಯೋಜನೆ, ಪ್ರಧಾನಮಂತ್ರಿ ಅವಾಸ್ ಯೋಜನೆ, ಡಾ.ಬಿ.ಆರ್.ಅಂಬೇಡ್ಕರ್ ವಸತಿ ಯೋಜನೆ ಸೇರಿದಂತೆ ಎಲ್ಲ ವಸತಿ ಯೋಜನೆಗಳಲ್ಲಿ ಕಮಿಷನ್ ಮೂಲಕ ಹಣ ಪಡೆಯುವುದೇ ಸರ್ಕಾರದ ಚಾಳಿಯಾಗಿದ್ದು, ಅವರದ್ದೇ ಪಕ್ಷದ ಶಾಸಕರ ಮುಖಾಂತರ ಈ ಹಗರಣ ಬಯಲಿಗೆ ಬಂದಿದೆ ಎಂದು ಆರೋಪಿದರು.  ವಸತಿ ಯೋಜನೆಯಲ್ಲಿ ಅಲ್ಪಸಂಖ್ಯಾತರಿಗೆ ಶೇಕಡ ೧೫ರಷ್ಟು ಮೀಸಲಾತಿ ನೀಡುವ ಮೂಲಕ ದಲಿತ, ಹಿಂದುಳಿದ ವರ್ಗಕ್ಕೆ ದೊಡ್ಡ ಅನ್ಯಾಯ ಮಾಡಲಾಗಿದೆ. ವಸತಿ ಯೋಜನೆಯ ಉದ್ದೇಶ ಬಡವರಿಗೆ, ನಿರ್ಗತಿಕರಿಗೆ, ಹಿಂದುಳಿದವರಿಗೆ ಮನೆ ನೀಡುವುದಾಗಿದೆ. ಆದರೆ ರಾಜ್ಯ ಸರ್ಕಾರ ಉಳ್ಳವರಿಗೆ ವಸತಿಯನ್ನು ಮಾರಿಕೊಳ್ಳುತ್ತಿದೆ ಎಂದು ಆರೋಪಿಸಿದರು. ವಸತಿ ಯೋಜನೆಯಲ್ಲಿ ನಡೆದ ಅಕ್ರಮದ ಬಗ್ಗೆ ಕೂಡಲೇ ತನಿಖೆಯಾಗಬೇಕು ಎಂದು ಆರ್.ಅಶೋಕ ಒತ್ತಾಯಿಸಿದರು.

><><><><><><><

ಹಾವೇರಿ ಜಿಲ್ಲೆಯಲ್ಲಿ ಮುಂಗಾರು ಪೂರ್ವ ಹಾಗೂ ಮುಂಗಾರು ಮಳೆ ಉತ್ತಮ ರೀತಿಯಲ್ಲಿ ಸುರಿಯುತ್ತಿದ್ದು, ಕೃಷಿ ಚಟುವಟಿಕೆಗಳಿಗೆ ಹುಮ್ಮಸ್ಸು ನೀಡಿದೆ. ಉತ್ತಮ ಮಳೆಯಿಂದಾಗಿ ಕೃಷಿ ಭೂಮಿ ಹದವಾಗಿದ್ದು, ಬೀಜ ಬಿತ್ತನೆಯಲ್ಲಿ ಉತ್ತಮ ಪ್ರಗತಿ ಕಂಡುಬಂದಿದೆ.  ಮುಂಗಾರು ಮಳೆ ಉತ್ತಮ ರೀತಿಯಲ್ಲಿ ಆರಂಭಗೊಂಡಿದ್ದು, ಜಿಲ್ಲೆಯಲ್ಲಿ ೩ ಲಕ್ಷದ ೧೪ ಸಾವಿರ ಹೆಕ್ಟೇರ್ ಬಿತ್ತನೆ ಪ್ರದೇಶವಿದೆ. ಈ ಪೈಕಿ ೨.೩೪ ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಈಗಾಗಲೇ ಬಿತ್ತನೆ ಪೂರ್ಣಗೊಂಡಿದೆ. ಉಳಿದ ಪ್ರದೇಶಗಳಲ್ಲಿ ಬಿತ್ತನೆ ಕೆಲಸ ಪ್ರಗತಿಯಲ್ಲಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಮಾಹಿತಿ ನೀಡಿದ್ದಾರೆ. ಮಳೆ ಆಶ್ರಿತದಲ್ಲಿ ೨ ಲಕ್ಷದ ೫೦ ಸಾವಿರ ಹೆಕ್ಟೇರ್ ಹಾಗೂ ನೀರಾವರಿಯಲ್ಲಿ ೬೩ ಸಾವಿರದ ೭೬೯ ಹೆಕ್ಟೇರ್ ಪ್ರದೇಶಗಳಲ್ಲಿ ಬಿತ್ತನೆ ಗುರಿಯಿದೆ. ಈಗಾಗಲೇ, ಮಳೆ

ಆಶ್ರಿತದಲ್ಲಿ ೨.೦೪ ಲಕ್ಷ ಹೆಕ್ಟೇರ್ ಹಾಗೂ ನೀರಾವರಿಯಲ್ಲಿ ೨೯ ಸಾವಿರ ಹೆಕ್ಟೇರ್ ಬಿತ್ತನೆ ಮುಕ್ತಾಯಗೊಂಡಿದೆ ಎಂದು ಅವರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಏಕದಳ, ದ್ವಿದಳ ಧಾನ್ಯ, ಎಣ್ಣೆಕಾಳುಗಳು, ವಾಣಿಜ್ಯ ಬೆಳೆಗಳ ಬಿತ್ತನೆ ನಡೆಯುತ್ತದೆ. ಜಿಲ್ಲೆಯಲ್ಲಿ ರೈತರ ಸಂಖ್ಯೆ ಹೆಚ್ಚಿರುವುದರಿಂದ, ಕೃಷಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಬಿತ್ತನೆ ಪ್ರದೇಶಕ್ಕೆ ತಕ್ಕಂತೆ ಬೀಜ ಹಾಗೂ ಗೊಬ್ಬರ ಪೂರೈಕೆಗೂ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗೆ ಅಗತ್ಯವಿರುವ ರಸಗೊಬ್ಬರಕ್ಕೆ ಬೇಡಿಕೆ ಹೆಚ್ಚಾಗಿದೆ. ಕೃಷಿ ಇಲಾಖೆಯ ಬಳಿ ೨೬ ಸಾವಿರದ ೯೪೪ ಮೆಟ್ರಿಕ್ ಟನ್ ರಸಗೊಬ್ಬರ ಸಂಗ್ರಹವಿದೆ ಎಂದು ಮಲ್ಲಿಕಾರ್ಜುನ ಮಾಹಿತಿ ನೀಡಿದ್ದಾರೆ.

><><><><<><><><><

ಭಾರತವು ಶ್ರೀಮಂತ ಮತ್ತು ವೈವಿದ್ಯಮಯ ಮೀನುಗಾರಿಕೆಯ ಸಂಪನ್ಮೂಲಗಳನ್ನು ಹೊಂದಿದೆ. ಸಾಂಪ್ರದಾಯಿಕವಾಗಿ ಲಕ್ಷಾಂತರ ಜನರ ಜೀವನೋಪಾಯವನ್ನು ಬೆಂಬಲಿಸುವ ವಲಯವಾಗಿದ್ದು, ವೈವಿಧ್ಯಮಯ ಮೀನು ಪ್ರಭೇದಗಳಿಂದ ಕೂಡಿದೆ. ಭಾರತೀಯ ಮೀನುಗಾರಿಕೆಯ ವಲಯವನ್ನು ಜೀವನೋಪಾಯ ಮತ್ತು ಉದ್ಯೋಗಾವಕಾಶಗಳನ್ನು ಒದಗಿಸುವ ಕೇಂದ್ರವಾಗಿದ್ದು, ಪೋಷಣೆ ಹಾಗೂ ಆಹಾರ ಭದ್ರತೆಯನ್ನು ಖಾತರಿಪಡಿಸುವ ಮತ್ತು ಅಂತಾರಾಷ್ಟ್ರೀಯ ವ್ಯಾಪಾರದ ಮೂಲಕ ರಾಷ್ಟ್ರದ ಆರ್ಥಿಕತೆಗೆ ಕೊಡುಗೆ ನೀಡುವ 'ಸೂರ್ಯೋದಯ ವಲಯ' ಎಂದು ಪರಿಗಣಿಸಲಾಗಿದೆ. ಭಾರತೀಯ ಮೀನುಗಾರಿಕೆ ವಲಯವನ್ನು ಹಂತ-ಹಂತವಾಗಿ ಬೆಳೆಯುತ್ತ, ಕ್ರಮೇಣವಾಗಿ ಬೆಳವಣಿಗೆಯಲ್ಲಿ ಸ್ಥಿರತೆಯನ್ನು ಕಾಯ್ದುಕೊಂಡಿದೆ. ಪ್ರಸ್ತುತ ಭಾರತವು ಮೀನು ಉತ್ಪಾದನೆಯಲ್ಲಿ ಶೇಕಡಾ ೮ ರಷ್ಟು ಜಾಗತಿಕ ಪಾಲನ್ನು ಹೊಂದಿರುವ ಎರಡನೇ ಅತಿ ದೊಡ್ಡ ಮೀನು ಉತ್ಪಾದಕ ರಾಷ್ಟ್ರವಾಗಿದೆ. ಜಲಚರ ಸಾಕಣೆ ಉತ್ಪಾದನೆಯಲ್ಲಿಯೂ ಭಾರತ ಎರಡನೇ ಸ್ಥಾನದಲ್ಲಿದ್ದು, ಸಮುದ್ರ ಮೀನುಗಾರಿಕೆಯಲ್ಲಿ ಮೂರನೇ ಸ್ಥಾನದಲ್ಲಿದೆ. ಸಿಗಡಿ ಉತ್ಪಾದಿಸುವ ಮತ್ತು ರಫ್ತು ಮಾಡುವ ಅಗ್ರ ರಾಷ್ಟ್ರಗಳಲ್ಲಿ ಒಂದಾಗಿದೆ. ೨೦೧೫ರಿಂದ ಮೀನುಗಾರಿಕೆಯ ಕ್ಷೇತ್ರದಲ್ಲಿ ಹೂಡಿಕೆ ಹೆಚ್ಚಾಗಿದ್ದು, ೫೭೨ ಕೋಟಿ ರೂಪಾಯಿ ಗರಿಷ್ಠ ಹೂಡಿಕೆಯಾಗಿದೆ. ಕಿಸಾನ್ ಸಮೃದ್ಧಿ ಸಹ - ಯೋಜನೆ ಮತ್ತು ಉಪಕ್ರಮಗಳ ಮೂಲಕ ಈ ವಲಯದಲ್ಲಿ ಹೂಡಿಕೆಯನ್ನು ತರಲಾಗಿದೆ. ಈ ಕುರಿತು ವಿಜಯಪುರ - ಭೂತನಾಳದ ಮೀನುಗಾರಿಕೆ ಸಂಶೋಧನಾ ಮತ್ತು ಮಾಹಿತಿ ಕೇಂದ್ರದ ಮುಖ್ಯಸ್ಥ ಡಾ. ವಿಜಯಕುಮಾರ್ ಎಸ್. ಇನ್ನಷ್ಟು ಮಾಹಿತಿಯನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

**ಧ್ವನಿ: ಡಾ. ವಿಜಯಕುಮಾರ್ ಎಸ್. (೪೧ ಸೆಕೆಂಡ್ ಗಳು)**

><><><><<><><><><

ಶೈಕ್ಷಣಿಕ, ಸಾಮಾಜಿಕ, ವಿವಿಧ ಅಭಿವೃದ್ಧಿಗಳಿಗೆ ಕೈಗೊಳ್ಳುವ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಎಂದು ನರಗುಂದ ಶಾಸಕ ಸಿ.ಸಿ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗದಗ ಜಿಲ್ಲೆಯ ಹೊಂಬಳ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹೊಂಬಳ ಗ್ರಾಮದ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ನಿರ್ಮಾಣ

ಕಾಮಗಾರಿ ಸೇರಿದಂತೆ ಗ್ರಾಮದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ೪ ಕೋಟಿ ೧೮ ಲಕ್ಷ ರೂಪಾಯಿಗಳ ಅನುದಾನ ಒದಗಿಸಲಾಗಿದೆ ಎಂದು ತಿಳಿಸಿದರು.

><><><<><><><><

ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಯುವ ಜನಾಂಗ ಕೈಜೋಡಿಸಬೇಕೆಂದು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಹೇಳಿದ್ದಾರೆ. ದಾವಣಗೆರೆ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಯುವ ಜನಾಂಗ ದೇಶದ ಆಸ್ತಿ. ಸರಿಯಾದ ಸಮಯದಲ್ಲಿ ಸೂಕ್ತವಾದ ನಿರ್ಧಾರ ಮತ್ತು ಮಾರ್ಗದರ್ಶನ ಪಡೆದರೆ, ಯುವ ಜನಾಂಗ ದೇಶದ ಶಕ್ತಿಯಾಗಿ ರೂಪುಗೊಳ್ಳಲಿದೆ. ಈ ನಿಟ್ಟಿನಲ್ಲಿ ಯುವಕರು ಮುಂದಾಗಬೇಕು ಎಂದು ಸಲಹೆ ನೀಡಿದರು.

><><><<><><><><

ಇನ್ನು ಹವಾವರ್ತಮಾನ

ರಾಜ್ಯದ ಕರಾವಳಿಯಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿದ್ದು, ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಒಂದೆರೆಡು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಬೆಂಗಳೂರಿನಲ್ಲು ಸಹ ಇಂದು ಸಾಧಾರಣ ಮಳೆಯಾಗಿದೆ. ಉತ್ತರಕನ್ನಡ ಜಿಲ್ಲೆಯ ಕದ್ರಾದಲ್ಲಿ ಅತಿಹೆಚ್ಚು ೧೧ ಸೆಂಟಿ ಮೀಟರ್ ಮಳೆಯಾಗಿದೆ. ಕಾರ್ಕಳ ೫, ಕ್ಯಾಸಲ್‌ರಾಕ್ ೪, ಸಿದ್ದಾಪುರ, ಮೂಡಬಿದ್ರೆ ಮತ್ತು ಕೊಟ್ಟಿಗೆಹಾgದಲ್ಲಿ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಭಾಗಮಂಡಲ, ಶೃಂಗೇರಿ, ಗುಬ್ಬಿ, ಕಮ್ಮರಡಿ, ಮಾಣಿ, ಉಪ್ಪಿನಂಗಡಿ, ಮಂಗಳೂರು ಮತ್ತು ಯಲ್ಲಾಪುರದಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ.

><><><<><><><><

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಕೃಷ್ಣಾ ಜಲಾಶಯದಲ್ಲಿಂದು ೭೨ ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯದ ಬಲ ಭಾಗದಲ್ಲಿರುವ ಆಲಮಟ್ಟಿ ಜಲ ವಿದ್ಯುದಾಗಾರಕ್ಕೆ ವಿದ್ಯುತ್ ಉತ್ಪಾದನೆಗಾಗಿ ೪೨ ಸಾವಿರ ೫೦೦ ಕ್ಯುಸೆಕ್ಸ್ ನೀರನ್ನು ಹರಿಸಲಾಗಿದೆ. ಮಹಾರಾಷ್ಟ್ರದ ವಿವಿಧ ಅಣೆಕಟ್ಟೆಗಳಿಂದ ೭೪ ಸಾವಿರ ಕ್ಯುಸೆಕ್ಸ್ ನೀರು ಹರಿದು ಬರುತ್ತಿದೆ. ಜಲಾಶಯದ ಗರಿಷ್ಠ ಎತ್ತರ ೫೧೯.೬೦ ಮೀಟರ್ ಇದ್ದು, ಜಲ ಸಾಮರ್ಥ್ಯ ೧೨೩.೦೮೧ ಟಿಎಂಸಿ ಆಗಿದೆ.

><><><<><><><><

೧.    ಒಲಿಂಪಿಕ್ ಕ್ರೀಡೆಯ ಮಹತ್ವದ ಜಾಗೃತಿಗೆ ಬೆಳಗಾವಿಯಲ್ಲಿ ಇಂದು ಆಯೋಜಿಸಲಾದ ಒಲಿಂಪಿಕ್ ಓಟಕ್ಕೆ ಶಾಸಕ ಹಾಗೂ ರಾಜ್ಯ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷ ಡಾ. ಕೆ.ಗೋವಿಂದರಾಜ್ ಚಾಲನೆ ನೀಡಿದರು.

೨.    ರಾಯಚೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಿಚ್ಚಾಲಿ ಗ್ರಾಮದಲ್ಲಿ ಸ್ವಾಮಿ ವಿವೇಕಾನಂದ ಯೂಥ್ ಮೂವ್‌ಮೆಂಟ್ ಹಾಗೂ ಪೇಪಾಲ್ ಪೇಮೆಂಟ್ಸ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಶ್ರೀ ಬೃಂದಾವನ ಮಹಿಳಾ ಸ್ವ-ಸಹಾಯ ಸಂಘದ ಗ್ರಾಮೀಣ ಸಾಮಾಜಿಕ ಉತ್ಪಾದನೆ ಘಟಕಕ್ಕೆ ಶಾಸಕ ಬಸನಗೌಡ ದದ್ದಲ್ ಹಾಗೂ ಸಂಸದ ಕುಮಾರ ನಾಯಕ ಚಾಲನೆ ನೀಡಿದರು.

೩.    ವಿಜಯಪುರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ವಿಜಯಪುರ ತಾಲೂಕಿನ ಜುಮನಾಳ, ಹಿಟ್ನಳ್ಳಿ ಐನಾಪುರ  ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಕಾಮಗಾರಿಗಳ ಪರಿಶೀಲನೆ ನಡೆಸಿದರು.

><><><<><><><><